# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **246** |
| ಉತ್ತರಿಸಬೇಕಾದ ದಿನಾಂಕ | : | 16.02.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಶಾಂತಿನಗರ ವಿಧಾನ ಸಭಾ ಕ್ಷೇತ್ರದ ಕೆ.ಎಚ್.ರಸ್ತೆ, ಅಕ್ಕಿತಿಮನಹಳ್ಳಿ ಗ್ರಾಮಕ್ಕೆ ಒಳಪಡುವ ಸಿ.ಟಿ.ಎಸ್- 1106, 1060 ಮತ್ತು 1059 ಈ ರೀತಿ ನಿವೇಶನಗಳ ಒಟ್ಟು ವಿಸ್ತೀರ್ಣ 2733.6 ಚ.ಮೀ ಕೊಳಚೆ ಪ್ರದೇಶವೆಂದು ಘೋಷಿಸಲಾಗಿದೆಯೇ; ಸದರಿ ಪ್ರದೇಶದಲ್ಲಿ ಯಾವ ಮೂಲಭೂತ ಸೌಕರ್ಯಗಳಿಲ್ಲದೇ ಎಷ್ಟು ಗುಡಿಸಲುಗಳು ಸರ್ಕಾರದ ಪ್ರಾಥಮಿಕ ಅಧಿಸೂಚನೆಯ ಸಂದರ್ಭದಲ್ಲಿ ನಿರ್ಮಾಣವಾಗಿದ್ದವು ಮತ್ತು ಪ್ರಸ್ತುತ ಎಷ್ಟು ಗುಡಿಸಲುಗಳು ಅಸ್ತಿತ್ವದಲ್ಲಿವೆ; ಸಂಬಂಧಿಸಿದ GIS ಮಾಹಿತಿ ನೀಡುವುದು ಮತ್ತು ಸರ್ಕಾರದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಕಡತದ ಸಂಖ್ಯೆ: ಕೆ.ಎಸ್.ಎ/ಸಿಆರ್/28/16-17 ಸಂಬಂಧಿಸಿದಂತೆ ಪ್ರಾಥಮಿಕ ಮತ್ತು ಅಂತಿಮ ಅಧಿಸೂಚನೆಯ ಎಲ್ಲಾ ಪ್ರತಿಗಳನ್ನು ಒದಗಿಸುವುದು; | ಬೆಂಗಳೂರು ನಗರದ ಶಾಂತಿನಗರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೆ.ಹೆಚ್.ರಸ್ತೆಯ ಖಾಸಗಿ ಜಮೀನಿನಲ್ಲಿರುವ ಕೊಳಚೆ ಪ್ರದೇಶವನ್ನು ಅಧಿಸೂಚನೆ ಸಂಖ್ಯೆ: ಕೆಎಸ್ಎ/ಸಿಆರ್/28/2016-17, ದಿನಾಂಕ:08-02-2018 ರಂದು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿಮತ್ತುನಿರ್ಮೂಲನೆ) ಕಾಯಿದೆ 1973 ರ ಕಲಂ-3 ರಡಿ ಅಂತಿಮವಾಗಿ ಕೊಳಚೆ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರು ಅಧಿಸೂಚನೆ ಹೊರಡಿಸಿರುತ್ತಾರೆ. ಅಧಿಸೂಚನೆಯಂತೆ ಸದರಿ ಕೊಳಚೆ ಪ್ರದೇಶವು ಸಿ.ಟಿ.ಎಸ್ ನಂ.1106, 1061, 1060 ಮತ್ತು 1059 ರಲ್ಲಿ ಒಟ್ಟು 2733.60 ಚ.ಮೀ (0-27 ಗುಂಟೆ) ವಿಸ್ತೀರ್ಣದಿಂದ ಕೂಡಿದ್ದು, ಖಾಸಗಿ ಮಾಲೀಕತ್ವದಲ್ಲಿರುತ್ತದೆ. ಪ್ರಾಥಮಿಕ ಅಧಿಸೂಚನೆ ಹೊರಡಿಸುವ ಸಮಯದಲ್ಲಿ ಈ ಪ್ರದೇಶದಲ್ಲಿ ಒಟ್ಟು 169 ಗುಡಿಸಲುಗಳಿದ್ದು, ಸದರಿ ಗುಡಿಸಲುಗಳು ಪ್ರಸ್ತುತ ಮುಂದುವರಿದಿದ್ದು, ಇತ್ತೀಚಿನ ಸರ್ವೆ ಕಾರ್ಯ ಮಾನ್ಯ ನ್ಯಾಯಾಲಯದ ಪ್ರತಿ ಬಂಧಕಾಜ್ಞೆ ಇರುವುದರಿಂದ ಸರ್ವೆ ಕಾರ್ಯ ಸ್ಥಗಿತಗೊಂಡಿರುತ್ತದೆ.<br><br>ಸದರಿ ಪ್ರದೇಶದ ಸ್ವತ್ತಿಗೆ ಸಂಬಂಧಿಸಿದಂತೆ ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಸಂಖ್ಯೆ:1121/2021 ರಂತೆ ಪ್ರಕರಣ ದಾಖಲಾಗಿದ್ದು, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯದಲ್ಲಿ ತಾತ್ಕಾಲಿಕ ಪ್ರತಿ ಬಂಧಕಾಜ್ಞೆ ಇರುವುದರಿಂದ ಪ್ರಸ್ತುತ ವಾಸವಿರುವ ಕೊಳಗೇರಿ ನಿವಾಸಿಗಳ ಸಮೀಕ್ಷೆ ಕಾರ್ಯ ಕೈಗೊಂಡಿರುವುದಿಲ್ಲ. ಸದರಿ ಕೊಳಚೆ ಪ್ರದೇಶದ ಪ್ರಾಥಮಿಕ ಮತ್ತು ಅಂತಿಮ ಅಧಿಸೂಚನೆ ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ. |
| ಆ) | ಅಕ್ಕಿತಿಮ್ಮನಹಳ್ಳಿ ಗ್ರಾಮಕ್ಕೆ ಒಳಪಡುವ ಸಿ.ಟಿ.ಎಸ್- 1106, 1061, 1060 ಮತ್ತು 1059 ನಿವೇಶನಗಳಿಗೆ ಸಂಬಂಧಿಸಿದ ಮಾಲೀಕರು ಯಾರು; (ಹೆಸರುಗಳನ್ನು ಮತ್ತು ವಿವರಗಳನ್ನು ಒದಗಿಸುವುದು) | ಅಕ್ಕಿ ತಿಮ್ಮನಹಳ್ಳಿ ಗ್ರಾಮಕ್ಕೆ ಒಳಪಡುವ ಸಿ.ಟಿ.ಎಸ್ 1106, 1061, 1060 ಮತ್ತು 1059 ರಲ್ಲಿನ ಕೊಳಚೆ ಪ್ರದೇಶಕ್ಕೆ ಸಂಬಂಧಿಸಿದಂತೆ ಮಾಲೀಕರ ವಿವರ ನಗರ ಮಾಪನ ದಾಖಲೆಯಲ್ಲಿ ಶ್ರೀಮತಿ ಎ.ಕುಕಲಿಂಗಮ್ಮ ಮತ್ತು ಶ್ರೀ ಅಣ್ಣಯ್ಯಪ್ಪ ಎಂದು ದಾಖಲಾಗಿರುತ್ತದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಇ) | ಸದರಿ ಪ್ರದೇಶಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ಆದೇಶಗಳು ಇವೆಯೇ, ಇದ್ದಲ್ಲಿ ವಿವರಗಳನ್ನು ಒದಗಿಸುವುದು ಮತ್ತು ಸದರಿ ನ್ಯಾಯಾಲಯಗಳ ಆದೇಶಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಮತ್ತು ಸರ್ಕಾರದಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ಮತ್ತು ಕ್ರಮಗಳ ಪ್ರಸ್ತುತ ಸ್ಥಿತಿಗತಿಗಳ ವಿವರಗಳನ್ನು ನೀಡುವುದು ? | ಕರ್ನಾಟಕ ಕೊಳಚೆ ಪ್ರದೇಶಗಳ(ಅಭಿವೃದ್ಧಿ ಮತ್ತು ನಿರ್ಮೂಲನೆ) ಅಧಿನಿಯಮ 1973 ರ ಕಲಂ 3 ರಡಿಯಲ್ಲಿ ಸಿ.ಟಿ.ಎಸ್ ನಂ. 1106, 1061, 1059 ಅನ್ನು ಹೊಂದಿರುವ ಕೆ.ಹೆಚ್. ರಸ್ತೆ (ಡಬಲ್ ರಸ್ತೆ) ಅಕ್ಕಿತಿಮ್ಮನಹಳ್ಳಿ (ಶಾಂತಿ ನಗರ ಸ್ಲಂ) ನಲ್ಲಿರುವ ಖಾಸಗಿ ಜಮೀನಿನಲ್ಲಿರುವ 27 ಗುಂಟೆ ಪ್ರದೇಶವನ್ನು ಅಂತಿಮವಾಗಿ ಕೊಳಚೆ ಪ್ರದೇಶವೆಂದು ಘೋಷಿಸಿ, ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರು ಸಂಖ್ಯೆ:KSA/CR/28/16-17, ದಿನಾಂಕ:08.02.2018 ರ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸದರಿ ಅಧಿಸೂಚನೆಯನ್ನು ರದ್ದುಗೊಳಿಸುವಂತೆ ಡಾ: ಸಂಜೀವ್ ಕುನ್ನತೂರ್, ಮೈಸೂರು ಇವರು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಸೆಕ್ಷನ್ 59 ರಡಿ ಮೇಲ್ಮನವಿ ಸಂಖ್ಯೆ: 03/2020 ಅನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯು ಬಾಕಿ ಇರುತ್ತದೆ.<br><br>ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ MFA ಸಂಖ್ಯೆ:2865/2021 ರ ಪ್ರಕರಣವು ಬಾಕಿ ಇರುತ್ತದೆ.<br><br>ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮೆ: ಅಭಯ ಎಸ್ಟೇಟ್, ಹೈದರಾಬಾದ್ ರವರು ಜಿಲ್ಲಾಧಿಕಾರಿಗಳು ಹೊರಡಿಸಿರುವ ದಿನಾಂಕ:08.02.2018 ರ ಅಂತಿಮ ಅಧಿಸೂಚನೆಯನ್ನು ರದ್ದುಪಡಿಸುವಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾವೆ ಸಂಖ್ಯೆ:14529/2021 ದಾಖಲಿಸಿದ್ದು, ಸದರಿ ಪ್ರಕರಣವು ಬಾಕಿ ಇರುತ್ತದೆ.<br><br>ಈ ಪ್ರಕರಣದಲ್ಲಿ ಮಾನ್ಯ ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ಮತ್ತು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣಗಳು ಬಾಕಿ ಇದ್ದು, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸದರಿಯವರು ಸಲ್ಲಿಸಿರುವ ಮೇಲ್ಮನವಿಯು ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ :ವಇ 20 ಎಸ್‌ಬಿಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು

ಕರ್ನಾಟಕ ಸರ್ಕಾರ
ಕಂದಾಯ ಇಲಾಖೆ

ಸಂಖ್ಯೆ:ಕೆಎಸ್ಎ/ಸಿಆರ್/ 28 / 16-17

279

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ
ಬೆಂಗಳೂರು, ದಿನಾಂಕ: 08-02-2018.

**-: ಅಂತಿಮ ಅಧಿಸೂಚನೆ :-**

ಪ್ರಾಥಮಿಕ ಅಧಿಸೂಚನೆ ಸಂಖ್ಯೆ:ಕೆಎಸ್ಎ/ಸಿಆರ್ 28/16-17 ದಿನಾಂಕ 19-06-2017 ರಲ್ಲಿ ಈ ಕೆಳಕಂಡ ಷೆಡ್ಯೂಲ್‌ನಲ್ಲಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಂತಿನಗರ ವಿಧಾನಸಭಾ ಕ್ಷೇತ್ರದ ಕೆ.ಹೆಚ್.ರಸ್ತೆಯ ಖಾಸಗಿ ಜಮೀನಿನಲ್ಲಿ ಇರುವ ಪ್ರದೇಶದ ಒಟ್ಟು ವಿಸ್ತೀರ್ಣದ 2733.60 ಚ.ಮೀ. (0-27 ಗುಂಟೆ) ಪ್ರದೇಶವನ್ನು, ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಕಲಂ-3 ರ ಅಡಿಯಲ್ಲಿ ಪ್ರಾರಂಭಿಕವಾಗಿ ಕೊಳಚೆ ಪ್ರದೇಶವೆಂದು ಘೋಷಿಸಿದ್ದು, ಸದರಿ ಅಧಿಸೂಚನೆಯು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ 14-09-2017 ರ ಸಂಚಿಕೆಯಲ್ಲಿ ಪ್ರಕಟಿಸಿ ಅಂತೆಯೇ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ.

ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಪತ್ರ ಸಂ.ಕಕೊಅಮಂ/ಕಂ-1/ಆರ್-1/02/15-15/591 ದಿನಾಂಕ 11-1-2018 ರಂತೆ ವರದಿಯನ್ನು ಸಲ್ಲಿಸಿ ಪ್ರಾಥಮಿಕ ಅಧಿಸೂಚನೆಗೆ ಯಾವುದೇ ಆಕ್ಷೇಪಣೆ ಬಂದಿರುವುದಿಲ್ಲವೆಂದು ವರದಿ ಸಲ್ಲಿಸಿ, ಸದರಿ ಪ್ರದೇಶವನ್ನು ಅಂತಿಮವಾಗಿ ಕೊಳಚೆ ಪ್ರದೇಶವೆಂದು ಘೋಷಿಸಲು ಕೋರಿಯತ್ತಾರೆ.

ಪ್ರಸ್ತಾವಿತ ಕೊಳಚೆ ಪ್ರದೇಶದಲ್ಲಿ ಕುಡಿಯುವ ನೀರು, ದೀಪ, ರಸ್ತೆ, ಚರಂಡಿ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಅಭಿವೃದ್ಧಿ ಪಡಿಸುವುದು ಅವಶ್ಯಕವಾಗಿರುತ್ತದೆ. ಆದ್ದರಿಂದ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಕಲಂ-3 ರಡಿಯಲ್ಲಿ ದತ್ತವಾಗಿರುವ ಅಧಿಕಾರದಂತೆ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಅಂತಿಮವಾಗಿ ಕೊಳಚೆ ಪ್ರದೇಶವೆಂದು ಘೋಷಿಸಲಾಗಿದೆ.

**-: ಷೆಡ್ಯೂಲ್ :-**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಂತಿನಗರ ವಿಧಾನಸಭಾ ಕ್ಷೇತ್ರದ ಕೆ.ಹೆಚ್.ರಸ್ತೆಯ ಖಾಸಗಿ ಜಮೀನಿನಲ್ಲಿ ಇರುವ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದು ಬಸ್ತು ಪಟ್ಟಿ

| ಕ್ರ ಸಂ. | ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ | ಮಾಲೀಕರ ಹೆಸರು [ನಗರ ಮಾಪನ ದಾಖಲೆಯಂತೆ] | ಸಿ.ಟಿ. ಎಸ್. ನಂ. | ವಿಸ್ತೀರ್ಣ (ಚ.ಮೀ.) | ಚಕ್ಕುಬಂದಿಗಳು | | | |
|---|---|---|---|---|---|---|---|---|
| | | | | | ಪೂರ್ವ | ಪಶ್ಚಿಮ | ಉತ್ತರ | ದಕ್ಷಿಣ |
| 1 | ಕೆ.ಹೆಚ್. ರಸ್ತೆಯ ಖಾಸಗಿ ಜಮೀನಿನಲ್ಲಿ ಇರುವ ನಿವಾಸಿಗಳ ಕೊಳಚೆ ಪ್ರದೇಶ | ವಿ.ಕಾಕಲಿಂಗಮ್ಮ<br>---<br>ಅಣ್ಣಯ್ಯಪ್ಪ ಬಿನ್ ಚಿಕ್ಕಣ್ಣ<br>ಅಣ್ಣಯ್ಯಪ್ಪ ಬಿನ್ ಚಿಕ್ಕಣ್ಣ | 1106<br>1061<br>1060<br>1059<br>ಒಟ್ಟು | 400.00<br>629.30<br>810.00<br>894.30<br>2733.60 [0-27 ಗುಂಟೆ] | CTS ನಂ.1053 ರಿಂದ 1058 | CTS ನಂ.1102 ರಿಂದ 1105 ಮತ್ತು 1106 ರ ಉಳಿಕೆ | CTS ನಂ.1107 ಮತ್ತು ಮೋರಿ | CTS ನಂ.1062 ಗಲ್ಲಿ ರಸ್ತೆ ಮತ್ತು 1106 ರ ಉಳಿಕೆ |

ಸಹಿ/-
(ವಿ.ಶಂಕರ್)
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಗೆ:

ಕಂಟ್ರೋಲರ್, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಮುದ್ರಣಾಲಯ, ಬೆಂಗಳೂರು-ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಅಧಿಸೂಚನೆಯನ್ನು ಮುಂದಿನ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸುವುದು ಹಾಗೂ ಪ್ರಕಟವಾದ ತಲಾ ಇಪ್ಪತ್ತೈದು ಪ್ರತಿಗಳನ್ನು (1) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಮತ್ತು (2) ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರಂ, ಬೆಂಗಳೂರು-20 ರವರಿಗೆ ಕಳುಹಿಸಿಕೊಡಲು ಕೋರಿದೆ.

—2

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಟಿ.ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು–20
3. ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರಂ, ಬೆಂಗಳೂರು–20 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4. ಜಂಟಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಕ್ಷಿಣ ವಲಯ, ಜಯನಗರ, ಬೆಂಗಳೂರು.
5. ತಹಶೀಲ್ದಾರ್, ಬೆಂಗಳೂರು ಉತ್ತರ(ಅಪರ) ತಾಲ್ಲೂಕು, ಕಂದಾಯ ಭವನ, ಬೆಂಗಳೂರು ರವರಿಗೆ ಮಾಹಿತಿಗಾಗಿ.
6. ಕಛೇರಿ ಪ್ರತಿ

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

## ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂ. ನಗರ ಜಿಲ್ಲೆ, ಬೆಂಗಳೂರು

ಸಂಖ್ಯೆ:ಕೆ.ಎಸ್.ಎ/ಸಿಆರ್/28/2016-17. ದಿನಾಂಕ: 19-06-2017.

### : : ಪ್ರಿಲಿಮಿನರಿ ಅಧಿಸೂಚನೆ : :

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಂತಿನಗರ ವಿಧಾನಸಭಾ ಕ್ಷೇತ್ರದ ಕೆ.ಹೆಚ್.[illegible] ಖಾಸಗಿ [illegible] ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 109 ಕುಟುಂಬಗಳು ವಾಸವಾಗಿದ್ದು, ಸದರಿ ಪ್ರದೇಶವು ಮನುಷ್ಯ ವಾಸ ಮಾಡಲು ಯೋಗ್ಯವಲ್ಲದ ಹಾಗೂ ಅನಾರೋಗ್ಯಕರ ಪರಿಸ್ಥಿತಿಯಲ್ಲಿರುತ್ತದೆ, ಕುಡಿಯುವ ನೀರು, ಬೀದಿ ದೀಪ, ಶೌಚಾಲಯ ಮುಂತಾದ ಮೂಲಸೌಲಭ್ಯ ಹಾಗೂ ಪುನರ್-ವಸತಿ ಕಲ್ಪಿಸುವ ಅಗತ್ಯವಿರುವುದರಿಂದ ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್ 3ರ ಅಡಿಯಲ್ಲಿ ಕೊಳಚೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಇವರಿಂದ ಪತ್ರ ಸಂಖ್ಯೆ:ಕಕೊಅಮ/ಕಂ-1/ಆರ್-1/3/2015-16/82, ದಿನಾಂಕ: 10-05-2017ರಂದು ಪ್ರಸ್ತಾವನೆ ಸಲ್ಲಿಸಲ್ಪಟ್ಟಿರುತ್ತದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರ ಅಡಿ ಕೊಳಚೆ ಪ್ರದೇಶವೆಂದು ಘೋಷಿಸಿರುವುದು ಅವಶ್ಯವೆಂದು ಕಂಡುಬಂದಿರುತ್ತದೆ.

ಸರ್ಕಾರದ ಸುತ್ತೋಲೆ ಸಂಖ್ಯೆ:71/ಕೊಮಂಇ/2009, ದಿನಾಂಕ: 24-02-2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ಮತ್ತು 11 ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶವೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗುತ್ತಿದ್ದು, ತದನಂತರದಲ್ಲಿ ಸರ್ಕಾರದ ಪತ್ರ ಸಂಖ್ಯೆ:ವಇ/71/ಕೊಮಂಇ/2009, ದಿನಾಂಕ: 12-07-2010ರ ಪತ್ರದಲ್ಲಿ ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ: 02-07-2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನು ಅನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ:ವಇ/73/ಕೊಮಂಇ/2001, ದಿನಾಂಕ: 26-06-2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರದಿಂದ ನಿರ್ದೇಶನ ನೀಡಲಾಗಿದೆ.

ಆದ್ದರಿಂದ, ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರ ಅಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದನ್ವಯ "ಕೊಳಚೆ ಪ್ರದೇಶ"ವೆಂದು ಘೋಷಿಸಲು ಉದ್ದೇಶಿಸಲಾಗಿದೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-560 020 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ 15 (ಹದಿನೈದು) ದಿನಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**: : ಷೆಡ್ಯೂಲ್ : :**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಂತಿನಗರ ವಿಧಾನಸಭಾ ಕ್ಷೇತ್ರದ ಕೆ.ಹೆಚ್.ರಸ್ತೆಯ ಖಾಸಗಿ ಜಮೀನಿನಲ್ಲಿರುವ ಕೊಳಚೆ ಪ್ರದೇಶದ ಚಕ್ಕುಬಂದಿ ಹಾಗೂ ಹೆದ್ದುಬಸ್ತು ತಃಖ್ತೆ:

| ಕ್ರ ಸಂ | ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ | ಮಾಲೀಕರ ಹೆಸರು [ನಗರ ಮಾಪನ ದಾಖಲೆಯಂತೆ] | ಸಿ.ಟಿ.ಎಸ್. ನಂ. | ವಿಸ್ತೀರ್ಣ [ಚ.ಮೀ] | ಚಕ್ಕುಬಂದಿಗಳು | | | |
|---|---|---|---|---|---|---|---|---|
| | | | | | ಪೂರ್ವ | ಪಶ್ಚಿಮ | ಉತ್ತರ | ದಕ್ಷಿಣ |
| 1 | KH ರಸ್ತೆಯ ಖಾಸಗಿ ಜಮೀನಿನಲ್ಲಿ ಇರುವ ನಿವಾಸಿಗಳ ಕೊಳಚೆ ಪ್ರದೇಶ | ಎ.ಕುಕ ನಿಂಗಪ್ಪ<br>—<br>ಅಣ್ಣಯ್ಯಪ್ಪ ಬಿನ್ ಚಿಕ್ಕಣ್ಣ<br>ಅಣ್ಣಯ್ಯಪ್ಪ ಬಿನ್ ಚಿಕ್ಕಣ್ಣ | 1106<br>1061<br>1060<br>1059<br>ಒಟ್ಟು | 400.00<br>629.30<br>810.00<br>894.30<br>2733.60<br>[0-27 ಗುಂಟೆ] | CTS ನಂ.1053 ರಿಂದ 1058 | CTS ನಂ.1102 ರಿಂದ 1105 ಮತ್ತು 1106ರ ಉಳಿಕೆ | CTS ನಂ.1107 ಮತ್ತು ಮೋರಿ | CTS ನಂ.1062, ಗಲ್ಲಿ ರಸ್ತೆ ಮತ್ತು 1106ರ ಉಳಿಕೆ |

[ ಎ.ಶಂಕರ್ ]
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಗೆ,

ಕಂಪೈಲರ್, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಬೆಂಗಳೂರು-ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಅಧಿಸೂಚನೆಯನ್ನು ಮುಂದಿನ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸುವುದು ಹಾಗೂ ಪ್ರಕಟವಾದ ತಲಾ ಇಪ್ಪತ್ತೈದು ಪ್ರತಿಗಳನ್ನು (1)ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ಮತ್ತು (2) ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-560 020 ರವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿಯನ್ನು:-

1] ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
2] ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3] ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-560 020 ರವರಿಗೆ ಕಳುಹಿಸುತ್ತಾ, ಸಂಬಂಧಿಸಿದ ಭೂ ಮಾಲೀಕರಿಗೆ ಜಾರಿ ಮಾಡಿ ಆಕ್ಷೇಪಣೆಗಳನ್ನು ಆಹ್ವಾನಿಸಲು ಕೋರಿದೆ.
4] ಜಂಟಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಕ್ಷಿಣ ವಲಯ, ಜಯನಗರ, ಬೆಂಗಳೂರು.
5] ತಹಸೀಲ್ದಾರ್, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ, ಬೆಂಗಳೂರು ರವರಿಗೆ ಮಾಹಿತಿಗಾಗಿ.
6] ಕಛೇರಿ ಪ್ರತಿ.

ಮಾಹಿತಿಹಕ್ಕು ಕಾಯ್ದೆಯಡಿ

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.